**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 120 |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 22.07.2024 (15-07-2024) |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕೊಪ್ಪಳದ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರಸಕ್ತ ವರ್ಷದಿಂದ ಸಾವಿನ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು) | ಕೊಪ್ಪಳ ಜಿಲ್ಲಾ ಬೋಧಕ ಆಸ್ಪತ್ರೆಯಲ್ಲಿ ದಾಖಲಾಗುವ ಒಳರೋಗಿಗಳ ಸಂಖ್ಯೆಯ ಶೇಕಡವಾರು ಪ್ರಮಾಣಕ್ಕೆ ಹೋಲಿಸಿದಾಗ ಮರಣ ಪ್ರಕರಣಗಳು ಹೆಚ್ಚಾಗಿರುವುದಿಲ್ಲ. ಕಾರಣ,<br>1. ಕೊಪ್ಪಳ ಜಿಲ್ಲಾ ಬೋಧಕ ಆಸ್ಪತ್ರೆಯು Tertiary Care Center ಆಗಿರುತ್ತದೆ.<br>2. ಸುತ್ತಮುತ್ತಲಿನ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಕೊನೆಯ ಹಂತದ Refferal ಗಳು ಬರುತ್ತಿರುತ್ತವೆ.<br>3. ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ NICU ಕೊಪ್ಪಳ ನಗರದಲ್ಲಿಯೇ ಒಂದೇ ಇದ್ದು, ಬೇರೆ ಯಾವುದೇ ABark ನೊಂದಾಯಿತ ಆಸ್ಪತ್ರೆಗಳು ಇರುವುದಿಲ್ಲ. ಆದುದರಿಂದ ಎಲ್ಲಾ ಅನಾರೋಗ್ಯ ನವಜಾತ ಶಿಶುಗಳಿಗೆ ಜಿಲ್ಲಾಸ್ಪತ್ರೆಯ NICU ಒಂದೇ Care Center ಆಗಿರುತ್ತದೆ.<br>4. ಪ್ರಸಕ್ತ ವರ್ಷ (01/01/2024 ರಿಂದ ಜೂನ್-2024ರವರೆಗೆ) 606 ರೋಗಿಗಳು ಮರಣ ಹೊಂದಿದ್ದು, ಈ ಸಂಖ್ಯೆಯು 14363 ಒಳ ರೋಗಿಗಳ ದಾಖಲಾತಿಯ 4.2% ನಷ್ಟು ಇರುತ್ತದೆ. ಇದು Tertiary Care ಆಸ್ಪತ್ರೆಗಳ ಮರಣ ಪ್ರಮಾಣದ Norms (10%) ಗಿಂತ ಕಡಿಮೆ ಇರುತ್ತದೆ. |
| ಆ) | ಜಿಲ್ಲಾ ಆಸ್ಪತ್ರೆಗಳಲ್ಲಿ ಇರಬೇಕಾದ ಒಟ್ಟು ಐಸಿಯು ಬೆಡ್‌ಗಳ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಹೆಚ್ಚಿಸಲು ಎಷ್ಟು ಸಮಯ ಬೇಕಾಗಿದೆ; (ಮಾಹಿತಿ ನೀಡುವುದು) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿಯ 19 ಜಿಲ್ಲಾಸ್ಪತ್ರೆಗಳಲ್ಲಿ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖಾ ವ್ಯಾಪ್ತಿಯ 22 ಆಸ್ಪತ್ರೆಗಳಲ್ಲಿ ಯಾವುದೇ ಐಸಿಯು ಬೆಡ್‌ಗಳ ಕೊರತೆ ಇರುವುದಿಲ್ಲ. |
| ಇ) | ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಸಿಗದೆ ಖಾಸಗಿ ಆಸ್ಪತ್ರೆಗಳತ್ತ ರೋಗಿಗಳು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಗಾಗಿ ಬರುತ್ತಿರುವ ಹೊರರೋಗಿಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆಗಳನ್ನು ನೀಡಿ ಹೆಚ್ಚಿನ ಚಿಕಿತ್ಸೆ ಅವಶ್ಯಕತೆಯಿದ್ದಲ್ಲಿ, ಸಮುದಾಯ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆ ಹಾಗೂ ಜಿಲ್ಲಾ ಆಸ್ಪತ್ರೆಗಳಿಗೆ ಕಳುಹಿಸಿ ಹೆಚ್ಚಿನ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಮುಂದುವರೆದು, ಜಿಲ್ಲಾ ಆಸ್ಪತ್ರೆಯಲ್ಲಿ ಲಭ್ಯವಿಲ್ಲದ ಚಿಕಿತ್ಸೆಗೆ ಸೂಪರ್ ಸ್ಪೆಷಾಲಿಟಿ ಚಿಕಿತ್ಸೆಗಾಗಿ AB-Ark ರಡಿ ಹೆಚ್ಚಿನ ಚಿಕಿತ್ಸೆಗೆ ಕಳುಹಿಸಲಾಗುತ್ತಿದೆ.<br><br>ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದ ಕಿಮ್ಸ್ ಕೊಪ್ಪಳ ಆಸ್ಪತ್ರೆಯಲ್ಲಿ ಕಿಮ್ಸ್ ಬೋಧಕ ಆಸ್ಪತ್ರೆಗೆ ಬರುವ ಎಲ್ಲಾ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲಾಗುತ್ತಿದೆ. ಬೋಧಕ |

| | | |
|---|---|---|
| | | ಆಸ್ಪತ್ರೆಯಲ್ಲಿ ಲಭ್ಯವಿಲ್ಲದ ಸೂಪರ್ ಸ್ಪೆಷಾಲಿಟಿ ಚಿಕಿತ್ಸೆಗಾಗಿ ABARK ಅಡಿಯಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ಕಳುಹಿಸಿಕೊಡಲಾಗುತ್ತಿದೆ. |
| ಈ) | ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಶಸ್ತ್ರ ಚಿಕಿತ್ಸೆ ನೀಡಲು ತಿಂಗಳುಗಟ್ಟಲೆ ಕಾಯಿಸಿ ಶಸ್ತ್ರ ಚಿಕಿತ್ಸೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವೈದ್ಯಾಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು? (ಜಿಲ್ಲಾವಾರು ಮಾಹಿತಿ ನೀಡುವುದು) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಆಸ್ಪತ್ರೆಗಳಲ್ಲಿ ಈ ಬಗ್ಗೆ ಯಾವುದೇ ವರದಿಯಾಗಿರುವುದಿಲ್ಲ.<br><br>ವೈದ್ಯಕೀಯ ಶಿಕ್ಷಣ ಇಲಾಖಾ ವ್ಯಾಪ್ತಿಯ ಸ್ವಾಯತ್ತ ಸಂಸ್ಥೆಗೆ ಹೊಂದಿಕೊಂಡಂತೆ ಇರುವ ಆಸ್ಪತ್ರೆಗಳಲ್ಲಿ ಕಿಮ್ಸ್ ಕೊಪ್ಪಳ ಸಂಸ್ಥೆಯನ್ನು ಹೊರತುಪಡಿಸಿ ಈ ಬಗ್ಗೆ ಯಾವುದೇ ವರದಿಯಾಗಿರುವುದಿಲ್ಲ.<br><br>ಕಿಮ್ಸ್ ಕೊಪ್ಪಳ ಸಂಸ್ಥೆಯಲ್ಲಿ ಶಸ್ತ್ರಚಿಕಿತ್ಸೆಗೆ ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಂಸ್ಥೆಯ ENT ವಿಭಾಗದ ಮುಖ್ಯಸ್ಥರಿಗೆ ಸಂಸ್ಥೆಯ ನಿರ್ದೇಶಕರ ಮೂಲಕ ಕಾರಣ ಕೇಳುವ ನೋಟಿಸ್ ಜಾರಿಗೊಳಿಸಲಾಗಿರುತ್ತದೆ ಹಾಗೂ ಶಸ್ತ್ರಚಿಕಿತ್ಸೆ ಬಾಕಿ ಇರುವ ರೋಗಿಗಳಿಗೆ ತುರ್ತಾಗಿ ಶಸ್ತ್ರಚಿಕಿತ್ಸೆ ನೀಡುವಂತೆ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿರುತ್ತದೆ. ಕಿಮ್ಸ್ ಬೋಧಕ ಆಸ್ಪತ್ರೆಯಲ್ಲಿ ಪ್ರಸ್ತುತ ಶಸ್ತ್ರಚಿಕಿತ್ಸೆಗಾಗಿ ಯಾವುದೇ ರೋಗಿಗಳು ಕಾಯುವ ಪರಿಸ್ಥಿತಿ ಇರುವುದಿಲ್ಲ. |

ಸಂಖ್ಯೆ:ಎಂಇಡಿ 330 ಎಂಪಿಎಸ್ 2024

(ಡಾ|| ಶರಣಪ್ರಕಾಶ ಆರ್. ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು